**ಕರ್ನಾಟಕ ಸರ್ಕಾರ**
**ಪಂಚಾಯತ್ ರಾಜ್ ಆಯುಕ್ತಾಲಯ**
**ಕಾಳಿದಾಸ ರಸ್ತೆ, ಗಾಂಧಿನಗರ ಬೆಂಗಳೂರು – 560 009.**

---

ಸಂಖ್ಯೆ:ಕಪಂರಾಆ/ಅಭಿವೃದ್ಧಿ/ ಕೆ.ಕೊ.ಮೀ /613/2023 ದಿನಾಂಕ: 26.07.2024
Comp. No: 1040664

**ಇವರಿಗೆ,**

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ

**ಮಾನ್ಯರೆ,**

**ವಿಷಯ:** ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ಕೆರೆಗಳು ಕೊಳಗಳು / ಒಳನಾಡಿನ ಜಲಾವೃತ ಪ್ರದೇಶ/ ಜಲವಿನ್ಯಾಸಗಳಲ್ಲಿ ಒಳನಾಡು ಮೀನುಗಾರಿಕೆ ಚಟುವಟಿಕೆಗಳಿಗೆ ಹರಾಜು ಅಥವಾ ಟೆಂಡರ್ ಪ್ರಕ್ರಿಯೆ ಕೈಗೊಳ್ಳುವ ಕುರಿತು

**ಉಲ್ಲೇಖ:** ಸರ್ಕಾರದ ಸುತ್ತೋಲೆ ಸಂಖ್ಯೆ:ಕ.ಪಂ.ರಾ.ಆ/ ಅಭಿವೃದ್ಧಿ /ಕೆ.ಕೋ.ಮಿ /2023 ದಿನಾಂಕ:30.08.2023

***********

ವಿಷಯಕ್ಕೆ ಸಂಬಂಧಿಸಿದಂತೆ ಗ್ರಾಮೀಣ ಪ್ರದೇಶಗಳಲ್ಲಿ ಮೀನು ಕೃಷಿಯು ಒಂದು ಉಪಕಸುಬು ಆಗಿದ್ದು, ಗ್ರಾಮೀಣ ಜನರಿಗೆ ಉದ್ಯೋಗ ಅವಕಾಶ ಒದಗಿಸುವಲ್ಲಿ ಮತ್ತು ಆದಾಯ ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆಯಲ್ಲದೆ ಕಡಿಮೆ ದರದಲ್ಲಿ ಉತ್ತಮ ಪ್ರೋಟಿನ್‌ಯುಕ್ತ ಆಹಾರ ದೊರಯುತ್ತಿದೆ. 40 ಹಕ್ಟೇರ್ ಗಿಂತ ಕಡಿಮೆ ಅಚ್ಚುಕಟ್ಟು ಪ್ರದೇಶವುಳ್ಳ ಕೆರೆಗಳು ಗ್ರಾಮ ಪಂಚಾಯತಿ ವ್ಯಾಪ್ತಿಗೆ ಒಳಪಟ್ಟಿವೆ. ಸುಮಾರು 3600 ಕೆರೆ, ಕೊಳಗಳು ಹಾಗೂ ರಾಜ್ಯದ ಜಲಾನಯನಗಳಲ್ಲಿ ನಿರ್ಮಿಸಿರುವ ವಿವಿಧ ಜಲವಿನ್ಯಾಸಗಳಲ್ಲಿ ವ್ಯವಸ್ಥಿತವಾಗಿ ಮೀನುಕೃಷಿ ಮತ್ತು ಮಾರಾಟ ಚಟುವಟಿಕೆಗಳಲ್ಲಿ ಮಹಿಳಾ ಸ್ವಸಹಾಯ ಗುಂಪುಗಳನ್ನು ತೊಡಗಿಸಿಕೊಳ್ಳುವ ಮೂಲಕ ಗ್ರಾಮೀಣ ಮಹಿಳೆಯರ ಸಬಲೀಕರಣದ ಗುರಿಯನ್ನು ಸಾಧಿಸಲು ಉದ್ದೇಶಿಸಲಾಗಿದೆ.

ಗ್ರಾಮ ಪಂಚಾಯತಿ ಒಕ್ಕೂಟಗಳ ಮೂಲಕ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಕೆರೆಗಳು ಕೊಳಗಳು/ಒಳನಾಡಿನ ಜಲಾವೃತ ಪ್ರದೇಶ/ಜಲವಿನ್ಯಾಸಗಳಲ್ಲಿ ಒಳನಾಡು ಮೀನುಗಾರಿಕೆ ಚಟುವಟಿಕೆಗಳನ್ನು ಮೀನುಗಾರಿಕೆ ಇಲಾಖೆ ಮತ್ತು ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ಸಂಯೋಜನೆಯ ಮೂಲಕ ಕೈಗೊಳ್ಳಲು ಉದ್ದೇಶಿಸಿರುವ ಕುರಿತು ಈಗಾಗಲೇ ಉಲ್ಲೇಖಿತ ಸುತ್ತೋಲೆಯಲ್ಲಿ ವಿವರವಾಗಿ ತಿಳಿಸಲಾಗಿದೆ.

ಆದ್ದರಿಂದ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟಗಳ ಮೂಲಕ ಮಹಿಳಾ ಸ್ವ-ಸಹಾಯ ಸಂಘಗಳಿಗೆ ಆದಾಯ ಉತ್ಪನ್ನಕರ ಚಟುವಟಿಕೆಯನ್ನು ಕೈಗೊಳ್ಳಲು ಅನುಕೂಲವಾಗುವಂತೆ ಮಾರ್ಗಸೂಚಿಗಳನ್ನು ಹೊರಡಿಸುವ ಪ್ರಕ್ರಿಯೆ ಪ್ರಗತಿಯಲ್ಲಿರುವುದರಿಂದ, ಸದರಿ ಮಾರ್ಗಸೂಚಿ ಹೊಡಿಸುವವರೆಗೆ ಪ್ರಸ್ತುತ ಆರ್ಥಿಕ ವರ್ಷದಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಕೆರೆಗಳು ಕೊಳಗಳು / ಒಳನಾಡಿನ ಜಲಾವೃತ ಪ್ರದೇಶ / ಜಲ

ವಿನ್ಯಾಸಗಳಲ್ಲಿ ಒಳನಾಡು ಮೀನುಗಾರಿಗೆ ಚಟುವಟಿಕೆಗಳಿಗೆ ಈಗಾಗಲೇ ನಿಯಮಾನುಸಾರ ನೀಡಲಾಗಿರುವ ಗುತ್ತಿಗೆಗಳನ್ನು ಹೊರತುಪಡಿಸಿ **ಹೊಸದಾಗಿ ಯಾವುದೇ ಮೀನುಪಾಶುವಾರು ಹರಾಜು ಮತ್ತು ಟೆಂಡರ್ ಪ್ರಕ್ರಿಯೆಯನ್ನು ಉಲ್ಲೇಖಿತ ಸುತ್ತೋಲೆಯಲ್ಲಿ ತಿಳಿಸಿರುವಂತೆ ಅಗತ್ಯ ಕ್ರಮ ವಹಿಸಲು** ಗ್ರಾಮ ಪಂಚಾಯಿತಿಗಳಿಗೆ ನಿರ್ದೇಶನ ನೀಡುವಂತೆ ತಿಳಿಸಿದೆ.

ತಮ್ಮ ವಿಶ್ವಾಸಿ,

26/7/24

ಆಯುಕ್ತರು

ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ

ಬೆಂಗಳೂರು

**ಪ್ರತಿಯನ್ನು ಅಗತ್ಯ ಕ್ರಮಕ್ಕಾಗಿ:**

1. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ (ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
2. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ (ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ರವರ ಮಾಹಿತಿಗಾಗಿ
2. ಕಛೇರಿ ಪ್ರತಿ